# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1025** |
| 2 | ಸದಸ್ಯರ ಹೆಸರು | : | ಶ್ರೀ ಗೋವಿಂದರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 23.02.2024 |
| 4 | ಉತ್ತರಿಸುವ ಸಚಿವರು | : | ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬಯಲು ಸೀಮೆ ಅಭಿವೃದ್ಧಿ ಮಂಡಳಿಯಲ್ಲಿ ಅಕ್ರಮ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು; | -ಬಂದಿದೆ-<br><br>ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ 2022-23ನೇ ಸಾಲಿನಲ್ಲಿ ಮಂಡಳಿಯ ಕಾರ್ಯದರ್ಶಿ ಹಾಗೂ ಅಧ್ಯಕ್ಷರು ಮಂಡಳಿ ಹಂತದಲ್ಲಿ ನಿರ್ಣಯ ಕೈಗೊಂಡು ಹೆಚ್ಚುವರಿ ಕಾಮಗಾರಿಗಳಿಗೆ ಅನುಮೋದನೆ ನೀಡಿ ಅವ್ಯವಹಾರ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದ ನಂತರ ನಿರ್ದೇಶಕರು, ಪ್ರದೇಶಾಭಿವೃದ್ಧಿ ಮಂಡಳಿರವರ ತಂಡವು ಪರಿಶೀಲನೆ ಕೈಗೊಂಡು ಹೆಚ್ಚುವರಿ ಮಂಜೂರಾತಿ ನೀಡಿದ್ದ ರೂ.362.53 ಕೋಟಿ ಕಾಮಗಾರಿಗಳಲ್ಲಿ ರೂ.224.05 ಕೋಟಿಗಳ 2374 ಕಾಮಗಾರಿಗಳನ್ನು ರದ್ದುಪಡಿಸಲಾಗಿದ್ದು, ಅನುದಾನ ಬಿಡುಗಡೆ ಮಾಡಿರುವ ಹಾಗೂ ಪ್ರಾರಂಭವಾಗಿರುವ ಕಾಮಗಾರಿಗಳನ್ನು ಮುಂದುವರೆದ ಕಾಮಗಾರಿಗಳೆಂದು ಪರಿಗಣಿಸಿ ಹೆಚ್ಚುವರಿಯಾಗಿ ರೂ.150.00 ಕೋಟಿಗಳನ್ನು ಮಂಜೂರು ಮಾಡಲು ಮಾನ್ಯ ಮುಖ್ಯ ಮಂತ್ರಿಯವರನ್ನು ಕೋರಲಾಗಿರುತ್ತದೆ.<br><br>ಹೆಚ್ಚುವರಿ ಮಂಜೂರಾತಿ ನೀಡಲು ಕಾರಣ ಕರ್ತರಾದ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಕಾರ್ಯದರ್ಶಿ, ಉಪ ಕಾರ್ಯದರ್ಶಿ ಮತ್ತು ವಿಷಯ ನಿರ್ವಾಹಕರನ್ನು ಅಮಾನತ್ತು ಮಾಡಲಾಗಿದೆ ಮತ್ತು ಸದರಿ ಅಧಿಕಾರಿ / ನೌಕರರು ಬೇರೆ ಬೇರೆ ಇಲಾಖೆಯಿಂದ ನಿಯೋಜನೆ ಮೇಲೆ ಮಂಡಳಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಸದರಿಯವರನ್ನು ಅವರ ಮಾತೃ ಇಲಾಖೆಗಳಿಗೆ ಬಿಡುಗಡೆ ಮಾಡಲಾಗಿದೆ. ಸದರಿ ಅಧಿಕಾರಿ / ನೌಕರರ ವಿರುದ್ಧ ಇಲಾಖಾ ವಿಚಾರಣೆ ಪ್ರಕ್ರಿಯೆಯು ಕೈಗೊಳ್ಳಲಾಗಿದೆ. |
| (ಆ) | ಮಂಡಳಿಯಲ್ಲಿ ಇದುವರೆಗೂ ನಡೆದಿರುವ ಅಕ್ರಮಗಳು ಹಾಗೂ ಭ್ರಷ್ಟಾಚಾರ ಪ್ರಕರಣಗಳನ್ನು ಸರ್ಕಾರದಿಂದ ಪತ್ತೆ ಹಚ್ಚಲಾಗಿದಯೇ; | -ಹೌದು- |

| | | |
|---|---|---|
| (ಇ) | ಮಂಡಳಿಯ ಕಾರ್ಯದರ್ಶಿ, ಉಪ ಕಾರ್ಯದರ್ಶಿ ಹಾಗೂ ದ್ವಿತೀಯ ದರ್ಜೆ ಸಹಾಯಕರನ್ನು ಸರ್ಕಾರ ಅಮಾನತು ಮಾಡಲಾಗಿದೆಯೇ; ಹಾಗಿದ್ದಲ್ಲಿ, ಯಾವ ಪ್ರಕರಣದಲ್ಲಿ ಅಮಾನತ್ತು ಮಾಡಲಾಗಿದೆ; | -ಹೌದು-<br><br>ಸರ್ಕಾರದ ಅನುಮೋದನೆ ಇಲ್ಲದೇ ಮಂಡಳಿಯ ಹಂತದಲ್ಲಿ ನಿರ್ಣಯ ಕೈಗೊಂಡು ಹೆಚ್ಚುವರಿ ಕಾಮಗಾರಿಗಳಿಗೆ ಮಂಜೂರಾತಿ ನೀಡಲಾಗಿದ್ದ ಪ್ರಕರಣದಲ್ಲಿ ಅಮಾನತ್ತು ಮಾಡಲಾಗಿದೆ. |
| (ಈ) | ನಿಯಮ ಬಾಹಿರವಾಗಿ ಕಾರ್ಯನಿರ್ವಹಿಸಿ ಸರ್ಕಾರದ ಬೊಕ್ಕಸಕ್ಕೆ ನಷ್ಟವುಂಟು ಮಾಡಿರುವ ಅಧಿಕಾರಿಗಳಲ್ಲಿ ಇದುವರೆಗೂ ಎಷ್ಟು ಅಧಿಕಾರಿಗಳನ್ನು ಅಮಾನತ್ತುಗೊಳಿಸಲಾಗಿದೆ ಹಾಗೂ ಎಷ್ಟು ಅಧಿಕಾರಿ, ಸಿಬ್ಬಂದಿಗಳನ್ನು ಸೇವೆಯಿಂದ ವಜಾಗೊಳಿಸಲಾಗಿದೆ; (ಸಂಪೂರ್ಣ ವಿವರ ಒದಗಿಸುವುದು); | ನಿಯಮ ಬಾಹಿರವಾಗಿ ಕಾರ್ಯ ನಿರ್ವಹಿಸಿ ಹೆಚ್ಚುವರಿ ಮಂಜೂರಾತಿ ನೀಡಿದ್ದ ಇಬ್ಬರು ಅಧಿಕಾರಿಗಳನ್ನು ಹಾಗೂ ಒಬ್ಬ ನೌಕರರನ್ನು ಅಮಾನತ್ತು ಮಾಡಲಾಗಿದೆ. ಇಲಾಖೆ ವಿಚಾರಣೆ ಕೈಗೊಂಡಿದ್ದು ವಿಚಾರಣೆ ಪೂರ್ಣಗೊಂಡ ನಂತರ ಶಿಸ್ತು ಕ್ರಮಕೈಗೊಳ್ಳಲಾಗುತ್ತದೆ. |
| (ಉ) | ಅನುದಾನ ಬಿಡುಗಡೆಗೊಳಿಸಲು ಬಯಲುಸೀಮೆ ಅಭಿವೃದ್ಧಿ ಮಂಡಳಿಯವರು ಯಾವ ಮಾನದಂಡವನ್ನು ಅನುಸರಿಸುತ್ತಿದ್ದಾರೆ; ಕೆಲವೊಂದು ಜಿಲ್ಲೆಗೆ ಹೆಚ್ಚು, ಕೆಲವೊಂದು ಜಿಲ್ಲೆಗೆ ಕಡಿಮೆ ಅನುದಾನ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಪ್ರತಿ ವರ್ಷ ಆಯವ್ಯಯದಲ್ಲಿ ನಿಗಧಿಪಡಿಸುವ ಅನುದಾನಕ್ಕೆ ಮಂಡಳಿಯು ಸಭೆಯನ್ನು ಕರೆದು ಸಭೆಯ ತೀರ್ಮಾನದಂತೆ ಪ್ರತಿ ಕ್ಷೇತ್ರಕ್ಕೆ ಅನುದಾನವನ್ನು ಸಮಾನವಾಗಿ ಹಂಚಿಕೆ ಮಾಡಲಾಗುತ್ತದೆ.<br><br>2022-23ನೇ ಸಾಲಿನಲ್ಲಿ ಮಂಡಳಿಯ ಕಾರ್ಯದರ್ಶಿ ಮತ್ತು ಸಿಬ್ಬಂದಿಗಳು ಕೆಲವೊಂದು ಜಿಲ್ಲೆಗಳಿಗೆ ಹೆಚ್ಚು, ಕೆಲವು ಜಿಲ್ಲೆಗಳಿಗೆ ಕಡಿಮೆ ಅನುದಾನ ಬಿಡುಗಡೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |

ಸಂಖ್ಯೆ: ಪಿಡಿಎಸ್ 17 ಪಿಟಿಪಿ 2024

**(ಡಿ. ಸುಧಾಕರ್)**
**ಯೋಜನೆ, ಕಾರ್ಯಕ್ರಮ ಸಂಯೋಜನೆ**
**ಮತ್ತು ಸಾಂಖ್ಯಿಕ ಸಚಿವರು**